ಶ್ರೀ ಸಿದ್ದರಾಮಯ್ಯ (ಮಾನ್ಯ ವಿರೋಧ ಪಕ್ಷದ ನಾಯಕರು):– ಮಾನ್ಯ ಅಧ್ಯಕ್ಷರೆ, ನಿಮ್ಮ ಸ್ಥಾನದಲ್ಲಿ ಕುಳಿತುಕೊಳ್ಳುವಂತಹ...

(ಗೊಂದಲ)

2. ಕಾರ್ಯದರ್ಶಿಯವರ ವರದಿ

ಅಧ್ಯಕ್ಷರು: ಕಾರ್ಯದರ್ಶಿಯವರ ವರದಿ.

(ಗೊಂದಲ)

ಕಾರ್ಯದರ್ಶಿ:– ಸನ್ಮಾನ್ಯ ಅಧ್ಯಕ್ಷರೆ, ಘನತೆವೆತ್ತ ರಾಜ್ಯಪಾಲರು ಮಾಡಿ ಭಾಷಣದ ಪ್ರತಿಯನ್ನು ಸಭೆಯಲ್ಲಿ ಮಂಡಿಸುತ್ತಿದ್ದೇನೆ ಹಾಗೂ ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಘನತೆವೆತ್ತ ರಾಜ್ಯಪಾಲರು ಮಾಡಿದ ಭಾಷಣದ ಕನ್ನಡ ಪ್ರತಿ

ಸನ್ಮಾನ್ಯ ಸಭಾಪತಿಯವರೇ, ಸನ್ಮಾನ್ಯ ಸಭಾಧ್ಯಕ್ಷರೇ ಮತ್ತು ಸನ್ಮಾನ್ಯ ಸದಸ್ಯರೇ,

1. ಕರ್ನಾಟಕ ವಿಧಾನಮಂಡಲದ ಈ ಜಂಟಿ ಅಧಿವೇಶನಕ್ಕೆ ನಿಮ್ಮೆಲ್ಲರನ್ನು ಸ್ವಾಗತಿಸಲು ಅತೀವ ಹರ್ಷವೆನಿಸುತ್ತದೆ.
2. ಕರ್ನಾಟಕ ಜನತೆಗೆ ಸೇವೆ ಸಲ್ಲಿಸಲು ಮತ್ತು ರಾಜ್ಯದ ನಾಗರೀಕರ ಯೋಗಕ್ಷೇಮಕ್ಕಾಗಿ ಕೆಲಸ ಮಾಡಲು ಇದು ನನಗೆ ಒದಗಿಬಂದ ಸದಾವಕಾಶವೆಂದು ನಾನು ಭಾವಿಸುತ್ತೇನೆ. ನನ್ನ ಸರ್ಕಾರವು ಜನತೆಗೆ ಅತ್ಯಂತ ಫಲಪ್ರದ ಮತ್ತು ದಕ್ಷ ಆಡಳಿತವನ್ನು ಕೊಡಲು ಕಳೆದ ಮೂರೂವರೆ ವರ್ಷಗಳಿಂದ ಅವಿರತವಾಗಿ ಶ್ರಮಿಸುತ್ತಿದೆ. ಇನ್ನೂ ಹೆಚ್ಚಿನ ಜವಾಬ್ದಾರಿಯುತ ಆಡಳಿತ ನೀಡುವ ಒಂದು ದೃಢ ನಿರ್ಣಯದೊಂದಿಗೆ ಮುಂದೆ ಸಾಗಲು ನಾನು ನಿಮ್ಮೆಲ್ಲರನ್ನು ಒತ್ತಾಯಿಸುತ್ತೇನೆ.